ವಿಷಯ : ಶ್ರೀ. ಮಹಾತ್ಮಾಗಾಂಧಿ ಪ್ರೌಢಶಾಲೆ ಯಲ್ಲಾಪುರ ತಾಲ್ಲೂಕು ಹಿರೇಕೆರೂರು ಶಾಲೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಶಿಷ್ಯ ವೇತನ ನೀಡದೇ ಇರುವುದು

1289 (1735)-ಶ್ರೀ ಯು. ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಶ್ರೀ ಮಹಾತ್ಮಾಗಾಂಧಿ ಪ್ರೌಢಶಾಲೆ ಯಲ್ಲಾಪುರ ತಾಲ್ಲೂಕು, ಹಿರೇಕೆರೂರು ಶಾಲೆಯಲ್ಲಿ ಕಲಿಯುತ್ತಿರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಶಿಷ್ಯ ವೇತನ ಅರ್ಜಿ ಕೊಡದೇ ಸತಾಯಿಸುತ್ತಿರುವುದರಿಂದ ಮಕ್ಕಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಅರ್ಜಿ ಕೊಡಲು ವಿಳಂಬ ಮಾಡಿದ್ದಕ್ಕೆ ಕಾರಣರು ಯಾರು ?

ಇ) ಮುಂದೆ ಈ ರೀತಿ ಹೀಗಾಗದಂತೆ ಸರ್ಕಾರದವರು ಕ್ರಮ ಕೈಗೊಳ್ಳುವರೇ ?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು)

ಅ) ಬಂದಿದೆ

ಆ) ಸಮಾಜ ಕಲ್ಯಾಣ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಪತ್ರವ್ಯವಹಾರದಿಂದ ಸ್ವಲ್ಪ ತಡವಾಗಿದೆ.

ಇ) ಅರ್ಹ ವಿದ್ಯಾರ್ಥಿಗಳಿಗೆ ಈಗಾಗಲೇ ಶಿಷ್ಯ ವೇತನ ಮಂಜೂರಾಗಿದೆ.

ವಿಷಯ : ರಾಜ್ಯದ ತಾಲ್ಲೂಕು ಪಂಚಾಯಿತಿ, ಮಂಡಲ ಪಂಚಾಯಿತಿಗೆ ಬಿಡುಗಡೆಯಾದ ಅನುದಾನ

1290 (1718)-ಶ್ರೀ ರಾಜಶೇಖರ್ ಶೀಲವಂತ (ಗುಳೇದಗುಡ್ಡ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ನೀರು ಸರಬರಾಜು ಅನುದಾನ ತಾಲ್ಲೂಕು ಪಂಚಾಯಿತಿಯಿಂದ ಖರ್ಚಾಗುತ್ತಿದೆಯೇ ? ಅಥವಾ ಮಂಡಲ ಪಂಚಾಯಿತಿಯಿಂದ ಖರ್ಚಾಗುತ್ತಿದೆಯೇ ?

ಆ) ಯಾವಯಾವ ಜಿಲ್ಲೆಯಲ್ಲಿ ತಾಲ್ಲೂಕು ಪಂಚಾಯಿತಿ ಹಾಗೂ ಮಂಡಲ ಪಂಚಾಯಿತಿಗಳಿಗೆ ಅನುದಾನ ಬಿಡುಗಡೆ ಆಗಿದೆ ?